ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ತಾಲ್ಲೂಕು ಮಟ್ಟಗಳಲ್ಲಿ ಸಾಂಸ್ಕೃತಿಕ ಕಲಾಭವನಗಳ ನಿರ್ಮಾಣ ಕುರಿತು

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

281 (457) ಮಾನ್ಯ ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕನ್ನಡ ಸಂಘ ಸಂಸ್ಥೆಗಳು ಮತ್ತು ಕಲಾವಿದರುಗಳು ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಲು ತಾಲ್ಲೂಕು ಮಟ್ಟಗಳಲ್ಲಿ ಸಾಂಸ್ಕೃತಿಕ ಕಲಾಭವನಗಳನ್ನು ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಕಡೆ ಸಾಂಸ್ಕೃತಿಕ ಕಲಾಭವನಗಳಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಒಂದು ವೇಳೆ ತಾಲ್ಲೂಕು ಮಟ್ಟಗಳಲ್ಲಿ ಇಲ್ಲದಿದ್ದರೆ ಯಾವಾಗ ನಿರ್ಮಿಸಲಾಗುವುದು ?